ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1739 (2075)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಕಂದಾಯ ಸಚಿವರು

ವಿಷಯ : ಪೋಡಿ ಮುಕ್ತ ಗ್ರಾಮ ಯೋಜನೆಯ ಕುರಿತು.

(ಅ) ಕಂದಾಯ ಇಲಾಖೆಯಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಕಾರ್ಯಕ್ರಮದ ಮಾರ್ಗಸೂಚಿ ಯಾವುದು; (ಸರ್ಕಾರದ ಆದೇಶ ಮಾರ್ಗಸೂಚಿಯ ಪ್ರತಿಯನ್ನು ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆಯನ್ನು ಯಾವ ಯಾವ ಗ್ರಾಮಗಳಲ್ಲಿ ನಡೆಸಲಾಗಿದೆ; ಅಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಪೋಡಿಯಾದ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿಯಿರಲು ಕಾರಣಗಳೇನು ;

(ಇ) ಉಡುಪಿ ಜಿಲ್ಲೆಯಲ್ಲಿ ಪೋಡಿ ಮುಕ್ತ ಗ್ರಾಮ ಕಾರ್ಯಕ್ರಮವನ್ನು ಆಯೋಜಿಸಲು ಬಾಕಿಯಿರುವ ಗ್ರಾಮಗಳು ಯಾವುವು; ಬಾಕಿಯಿರಲು ಕಾರಣವೇನು ; ಈ ಕಾರ್ಯಕ್ರಮವನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?